ಕುಶಾಲನಗರ ಯೋಜನಾ ಪ್ರಾಧಿಕಾರ ಕುಶಾಲನಗರ

ಕಾವೇರಿ ಬಡಾವಣೆ, ಸಂ.05, ಬ್ಲಾಕ್ ನಂ.01, ಕುಶಾಲನಗರ – 571234

Email Id: kushalnagaradtp@hotmail.com ದೂರವಾಣಿ ಸಂ: 08276–274040

ಕುಶಾಲನಗರ ಯೋಜನಾ ಪ್ರಾಧಿಕಾರದ ಅಧ್ಯಕ್ಷರಾದ ಶ್ರೀ.ಎಂ.ಎಂ. ಚರಣ್ ಇವರ ಅಧ್ಯಕ್ಷತೆಯಲ್ಲಿ ದಿನಾಂಕ: 21–03–2023 ರ ಮಂಗಳವಾರದಂದು ಪೂರ್ವಾಹ್ನ 11.30 ಗಂಟೆಗೆ ನಡೆದ ಪ್ರಾಧಿಕಾರದ 55 ನೇ ಸಾಮಾನ್ಯ ಸಭೆಯ ನಡಾವಳಿ

ಸಭೆಯಲ್ಲಿ ಹಾಜರಿದ್ದವರು :–

1. ಶ್ರೀ ಎಂ.ಎಂ. ಚರಣ್, ಅಧ್ಯಕ್ಷರು
2. ಶ್ರೀ ವೈಶಾಖ್, ನಾಮನಿರ್ದೇಶಿತ ಸದಸ್ಯರು.
3. ಶ್ರೀ ಪುಂಡರೀಕಾಕ್ಷ, ನಾಮನಿರ್ದೇಶಿತ ಸದಸ್ಯರು
4. ಶ್ರೀ ಮಧುಸೂಧನ್, ನಾಮನಿರ್ದೇಶಿತ ಸದಸ್ಯರು
5. ಮುಖ್ಯಾಧಿಕಾರಿಗಳು, ಪುರಸಭೆ, ಕುಶಾಲನಗರ
6. ಸದಸ್ಯ ಕಾರ್ಯದರ್ಶಿ, ಕುಶಾಲನಗರ ಯೋಜನಾ ಪ್ರಾಧಿಕಾರ
7. ಶ್ರೀ ಅಮೃತ್‌ರಾಜ್, ಸ್ಥಳೀಯ ಸಂಸ್ಥೆ ನಾಮನಿರ್ದೇಶಿತ ಸದಸ್ಯರು

ವಿಷಯ ಸಂಖ್ಯೆ(01): ದಿನಾಂಕ: 17–02–2023 ರಂದು ನಡೆದ ಪ್ರಾಧಿಕಾರದ 54ನೇ ಸಾಮಾನ್ಯ ಸಭೆಯ ನಡವಳಿಗಳನ್ನು ಓದಿ ಸ್ಥಿರೀಕರಿಸುವ ಬಗ್ಗೆ.

ಟಿಪ್ಪಣಿ: ದಿನಾಂಕ: 17–02–2023 ರಂದು ನಡೆದ ಪ್ರಾಧಿಕಾರದ 54ನೇ ಸಾಮಾನ್ಯ ಸಭೆಯ ನಡವಳಿಗಳನ್ನು ಓದಿ ಓಪ್ಪಿ ಸ್ಥಿರೀಕರಿಸುವ ಬಗ್ಗೆ ಸಭೆಯ ನಿರ್ಣಯಕ್ಕಾಗಿ ಮಂಡಿಸಿದೆ.

ನಿರ್ಣಯ: ಪ್ರಾಧಿಕಾರದ 54ನೇ ಸಾಮಾನ್ಯ ಸಭೆಯ ನಡವಳಿಗಳನ್ನು ಸಭೆಯಲ್ಲಿ ಓದಿ, ಯಾವುದೇ ಆಕ್ಷೇಪಣೆ ವ್ಯಕ್ತವಾಗದ ಕಾರಣ ಸದರಿ ನಡವಳಿಗಳನ್ನು ಒಪ್ಪಿ ಸರ್ವಾನುಮತದಿಂದ ಸ್ಥಿರೀಕರಿಸಲಾಯಿತು.

ವಿಷಯ ಸಂಖ್ಯೆ:(02): ಪ್ರಾಧಿಕಾರದ ಖಾತೆಗೆ ಫೆಬ್ರವರಿ 2023 ರ ಮಾಹೆಯ ಜಮಾ ಮತ್ತು ಖರ್ಚುಗಳ ವಿವರಗಳನ್ನು ಪ್ರಾಧಿಕಾರದ ಸಭೆಗೆ ಮಂಡಿಸುವ ಬಗ್ಗೆ.

ಟಿಪ್ಪಣಿ: ಫೆಬ್ರವರಿ 2023 ರ ಮಾಹೆಯ ಜಮಾ & ಖರ್ಚುಗಳನ್ನು ಸ್ಥಿರೀಕರಣಕ್ಕಾಗಿ ಮಂಡಿಸಲಾಗಿದೆ.

ಕ್ರ.ಸಂ.	ಖಾತೆಯ ವಿವರ	ಪ್ರಾರಂಭಿಕ ಶಿಲ್ಕು ರೂ.ಗಳಲ್ಲಿ	ಮಾಹೆಯ ಜಮಾ. ರೂ.ಗಳಲ್ಲಿ	ಒಟ್ಟು	ಮಾಹೆಯ ಖರ್ಚು. ರೂ.ಗಳಲ್ಲಿ	ಉಳಿಕೆ ಶಿಲ್ಕು ರೂ.ಗಳಲ್ಲಿ
1	2	3	4	5	6	7
ಫೆಬ್ರವರಿ–2023						
1	ಉಳಿತಾಯ ಶುಲ್ಕದ ಖಾತೆ	23,10,124.50	9,33,840.00	32,43,964.50	3,42,656.00	29,01,308.50
2	ಕೆರೆ ಅಭಿವೃದ್ಧಿ ಶುಲ್ಕದ ಖಾತೆ	1,96,954.00	3,840.00	2,00,794.00		2,00,794.00
3	ಸೆಸ್ ಶುಲ್ಕದ ಖಾತೆ	91,529.00	78,350.00	1,69,879.00		1,69,879.00

ನಿರ್ಣಯ: ಫೆಬ್ರವರಿ 2023 ರ ಮಾಹೆಯ ಜಮಾ ಮತ್ತು ಖರ್ಚುಗಳನ್ನು ಸಭೆಯಲ್ಲಿ ಚರ್ಚಿಸಿ, ಸರ್ವಾನುಮತದಿಂದ ಒಪ್ಪಿ ಸ್ಥಿರೀಕರಿಸಲಾಯಿತು.

ವಿಷಯ ಸಂಖ್ಯೆ(03): ದಿನಾಂಕ: 17–02–2023 ರಿಂದ 20–03–2023 ರವರೆಗೆ ಏಕ–ನಿವೇಶನ ವಿನ್ಯಾಸ ನಕ್ಷೆಗೆ ಪ್ರಾಧಿಕಾರದ 40ನೇ ಸಾಮಾನ್ಯ ಸಭೆಯ ವಿಷಯ ಸಂಖ್ಯೆ(16)ರ ನಿರ್ಣಯದಂತೆ ತಾಂತ್ರಿಕ ಅನುಮೋದನೆಯನ್ನು ನೀಡಲಾಗಿದ್ದು, ಸದರಿ ಅನುಮೋದನೆಯನ್ನು ಸ್ಥಿರೀಕರಿಸಲು ಮಂಡಿಸಿರುವ ಬಗ್ಗೆ.

i. ಕೊಡಗು ಜಿಲ್ಲೆ, ಕುಶಾಲನಗರ ತಾಲ್ಲೂಕು, ಕುಶಾಲನಗರ ಹೋಬಳಿ, ಮಾದಾಪಟ್ಟಣ ಗ್ರಾಮದ ಸ.ನಂ. 11/13 ರಲ್ಲಿ 0.04.50 ಎಕರೆ ವಿಸ್ತೀರ್ಣದ ಜಮೀನಿನ ವಸತಿ ಏಕ–ನಿವೇಶನ ವಿನ್ಯಾಸ ನಕ್ಷೆಗೆ ಅನುಮೋದನೆ ನೀಡಿರುವ ಬಗ್ಗೆ (**ಅರ್ಜಿದಾರರು:– ಶ್ರೀ ಕೆ. ಪ್ರಮೋದ್ ಮುತ್ತಪ್ಪ**).

ಟಿಪ್ಪಣಿ: ಕೊಡಗು ಜಿಲ್ಲೆ, ಕುಶಾಲನಗರ ತಾಲ್ಲೂಕು, ಕುಶಾಲನಗರ ಹೋಬಳಿ, ಮಾದಾಪಟ್ಟಣ ಗ್ರಾಮದ ಸ.ನಂ. 11/13 ರಲ್ಲಿ 0.04.50 ಎಕರೆ ವಿಸ್ತೀರ್ಣದ ಜಮೀನನ್ನು ಜಿಲ್ಲಾಧಿಕಾರಿಗಳು, ಕೊಡಗು ಜಿಲ್ಲೆ, ಇವರ ಅಧಿಕೃತ ಜ್ಞಾಪನ ಪತ್ರ ಸಂ: LAND10001259 ದಿನಾಂಕ: 27–09–2019 ರಲ್ಲಿ ವಸತಿ ಉದ್ದೇಶಕ್ಕೆ ಭೂ–ಪರಿವರ್ತಿಸಿ ಆದೇಶಿಸಿರುತ್ತಾರೆ. ಪ್ರಶ್ನಿತ ಜಮೀನು ಸರ್ಕಾರದಿಂದ ಅನುಮೋದನೆಗೊಂಡ ಮಹಾಯೋಜನೆ–2031 ರಂತೆ ವಸತಿ ವಲಯದಲ್ಲಿದೆ. ಪ್ರಸ್ತಾವಿತ ಜಮೀನು ವಾಯುವ್ಯ ದಿಕ್ಕಿನಲ್ಲಿ 10.05ಮೀ ಅಗಲದ ಸಾರ್ವಜನಿಕ ರಸ್ತೆಗೆ ಲಗತ್ತಾಗಿದ್ದು, ಸದರಿ ರಸ್ತೆಯನ್ನು ಮಹಾಯೋಜನೆಯಂತೆ 15.0ಮೀ ಅಗಲೀಕರಣಕ್ಕೆ ವಿನ್ಯಾಸ ನಕ್ಷೆಯಲ್ಲಿ ಪ್ರಸ್ತಾವಿಸಲಾಗಿದೆ. ಭೂದಾಖಲೆಗಳ ಸಹಾಯಕ ನಿರ್ದೇಶಕರು ಸಹಿ ಮಾಡಿ ನೀಡಿರುವ ಸರ್ವೆ ನಕ್ಷೆಯಂತೆ ವಿನ್ಯಾಸದಲ್ಲಿ ಎಲ್ಲೆ/ಸುತ್ತಳತೆಯನ್ನು ನಿಗಧಿಪಡಿಸಿ ವಿನ್ಯಾಸ ನಕ್ಷೆಯನ್ನು ಸಿದ್ಧಪಡಿಸಿದ್ದು, ವಸತಿ ಉಪಯೋಗಕ್ಕಾಗಿ 144.96 ಚ.ಮೀ (ಶೇ. 79.95%) ಮತ್ತು ರಸ್ತೆ ವಿಸ್ತರಣೆಗಾಗಿ 36.35 ಚ.ಮೀ (ಶೇ. 20.05%) ವಿಸ್ತೀರ್ಣದ ಪ್ರದೇಶವನ್ನು ಕಾಯ್ದಿರಿಸಿ ದಿನಾಂಕ:17–03–2020 ರಂದು ನಡೆದ ಪ್ರಾಧಿಕಾರದ 40ನೇ ಸಾಮಾನ್ಯ ಸಭೆಯ ವಿಷಯ ಸಂಖ್ಯೆ(16)ರ ನಿರ್ಣಯದಂತೆ, ಮಹಾಯೋಜನೆ–2031 ರ ವಲಯ ನಿಯಮಾವಳಿಯ ಅಧ್ಯಾಯ 34(ಬಿ) ಹಾಗೂ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ಕಲಂ 17 ರನ್ವಯ ಸದರಿ ವಸತಿ ಏಕ–ನಿವೇಶನ ವಿನ್ಯಾಸ ನಕ್ಷೆಗೆ ದಿನಾಂಕ: 04–03–2023 ರಂದು ತಾಂತ್ರಿಕ ಅನುಮೋದನೆಯನ್ನು ನೀಡಲಾಗಿದ್ದು, ಸಭೆಯ ಸ್ಥಿರೀಕರಣಕ್ಕಾಗಿ ಪ್ರಾಧಿಕಾರದ ಸಭೆಗೆ ಮಂಡಿಸಿದೆ.

ii. ಕೊಡಗು ಜಿಲ್ಲೆ, ಕುಶಾಲನಗರ ತಾಲ್ಲೂಕು, ಕುಶಾಲನಗರ ಹೋಬಳಿ, ಗುಮ್ಮನಕೊಲ್ಲಿ ಗ್ರಾಮದ ಸ.ನಂ. 74/2 ರಲ್ಲಿ 0.12.50 ಎಕರೆ ವಿಸ್ತೀರ್ಣದ ಜಮೀನಿನ ವಸತಿ ಏಕ–ನಿವೇಶನ ವಿನ್ಯಾಸ ನಕ್ಷೆಗೆ ಅನುಮೋದನೆ ನೀಡಿರುವ ಬಗ್ಗೆ (**ಅರ್ಜಿದಾರರು:– ಶ್ರೀ ಎಂ.ಇ. ಮೊಹಿದ್ದೀನ್**).

ಟಿಪ್ಪಣಿ: ಕೊಡಗು ಜಿಲ್ಲೆ, ಕುಶಾಲನಗರ ತಾಲ್ಲೂಕು, ಕುಶಾಲನಗರ ಹೋಬಳಿ, ಗುಮ್ಮನಕೊಲ್ಲಿ ಗ್ರಾಮದ ಸ.ನಂ. 74/2 ರಲ್ಲಿ 0.12.50 ಎಕರೆ ವಿಸ್ತೀರ್ಣದ ಜಮೀನನ್ನು ಜಿಲ್ಲಾಧಿಕಾರಿಗಳು, ಕೊಡಗು ಜಿಲ್ಲೆ, ಇವರ ಅಧಿಕೃತ ಜ್ಞಾಪನ ಪತ್ರ ಸಂ: 403467 ದಿನಾಂಕ: 27–09–2019 ರಲ್ಲಿ ವಸತಿ ಉದ್ದೇಶಕ್ಕೆ ಭೂ–ಪರಿವರ್ತಿಸಿ ಆದೇಶಿಸಿರುತ್ತಾರೆ. ಪ್ರಶ್ನಿತ ಜಮೀನು ಸರ್ಕಾರದಿಂದ ಅನುಮೋದನೆಗೊಂಡ ಮಹಾಯೋಜನೆ–2031 ರಂತೆ ವಸತಿ ವಲಯದಲ್ಲಿದೆ. ಪ್ರಸ್ತಾವಿತ ಜಮೀನು ದಕ್ಷಿಣ ಮತ್ತು ಪೂರ್ವ ದಿಕ್ಕಿನಲ್ಲಿ ಸಂಪರ್ಕ ರಸ್ತೆಗೆ ಹೊಂದಿಕೊಂಡಿದ್ದು, ದಕ್ಷಿಣ ದಿಕ್ಕಿನಲ್ಲಿರುವ ಹಾಲಿ ರಸ್ತೆಯನ್ನು ಮಹಾಯೋಜನೆಂತೆ 12.0ಮೀ ಅಗಲೀಕರಣಕ್ಕೆ ಮತ್ತು ಪೂರ್ವ ದಿಕ್ಕಿನಲ್ಲಿರುವ ರಸ್ತೆಯನ್ನು 9.0ಮೀ ಅಗಲೀಕರಣಕ್ಕೆ ವಿಸ್ತರಿಸಲು ವಿನ್ಯಾಸ ನಕ್ಷೆಯಲ್ಲಿ ಪ್ರಸ್ತಾವಿಸಲಾಗಿದೆ. ಭೂದಾಖಲೆಗಳ ಸಹಾಯಕ

ನಿರ್ದೇಶಕರು ಸಹಿ ಮಾಡಿ ನೀಡಿರುವ ಸರ್ವೆ ನಕ್ಷೆಯಂತೆ ವಿನ್ಯಾಸದಲ್ಲಿ ಎಲ್ಲೆ/ಸುತ್ತಳತೆಯನ್ನು ನಿಗಧಿಪಡಿಸಿ ವಿನ್ಯಾಸ ನಕ್ಷೆಯನ್ನು ಸಿದ್ಧಪಡಿಸಿದ್ದು, ವಸತಿ ಉಪಯೋಗಕ್ಕಾಗಿ 428.92 ಚ.ಮೀ (ಶೇ.85.23%) ಮತ್ತು ರಸ್ತೆ ವಿಸ್ತರಣೆಗಾಗಿ 74.31 ಚ.ಮೀ (ಶೇ.14..77%) ವಿಸ್ತೀರ್ಣದ ಪ್ರದೇಶವನ್ನು ಕಾಯ್ದಿರಿಸಿ ದಿನಾಂಕ:17–03–2020 ರಂದು ನಡೆದ ಪ್ರಾಧಿಕಾರದ 40ನೇ ಸಾಮಾನ್ಯ ಸಭೆಯ ವಿಷಯ ಸಂಖ್ಯೆ(16)ರ ನಿರ್ಣಯದಂತೆ, ಮಹಾಯೋಜನೆ–2031 ರ ವಲಯ ನಿಯಮಾವಳಿಯ ಅಧ್ಯಾಯ 34(ಬಿ) ಹಾಗೂ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ಕಲಂ 17 ರನ್ವಯ ಸದರಿ ವಸತಿ ಏಕ–ನಿವೇಶನ ವಿನ್ಯಾಸ ನಕ್ಷೆಗೆ ದಿನಾಂಕ:04–03–2023 ರಂದು ತಾಂತ್ರಿಕ ಅನುಮೋದನೆಯನ್ನು ನೀಡಲಾಗಿದ್ದು, ಸಭೆಯ ಸ್ಥಿರೀಕರಣಕ್ಕಾಗಿ ಪ್ರಾಧಿಕಾರದ ಸಭೆಗೆ ಮಂಡಿಸಿದೆ.

ನಿರ್ಣಯ: ಪ್ರಾಧಿಕಾರದ 40ನೇ ಸಾಮಾನ್ಯ ಸಭೆಯ ವಿಷಯ ಸಂಖ್ಯೆ(16)ರ ನಿರ್ಣಯದಂತೆ ಮೇಲ್ಕಾಣಿಸಿದ ಏಕ ನಿವೇಶನದ ಬಗ್ಗೆ ಕೂಲಂಕುಷವಾಗಿ ಚರ್ಚಿಸಿ ಈಗಾಗಲೇ ನಕ್ಷೆಗೆ ತಾಂತ್ರಿಕ ಅನುಮೋದನೆ ನೀಡಿರುವುದನ್ನು ಸಭೆಯು ಸರ್ವಾನುಮತದಿಂದ ಒಪ್ಪಿ ಸ್ಥಿರೀಕರಿಸಲಾಯಿತು

ವಿಷಯ ಸಂಖ್ಯೆ(4): ಕೊಡಗು ಜಿಲ್ಲೆ, ಕುಶಾಲನಗರ ತಾಲ್ಲೂಕು, ಕುಶಾಲನಗರ ಹೋಬಳಿ, ಮುಳ್ಳುಸೋಗೆ ಗ್ರಾಮದ ಸ.ನಂ. 57/10 ರಲ್ಲಿ 0.25 ಎಕರೆ ವಿಸ್ತೀರ್ಣದ ಜಮೀನಿನ ವಸತಿ ಉದ್ದೇಶದ ಏಕ–ನಿವೇಶನ ವಿನ್ಯಾಸ ನಕ್ಷೆಗೆ ಅನುಮೋದನೆ ನೀಡಲು ಕೋರಿರುವ ಬಗ್ಗೆ (**ಅರ್ಜಿದಾರರು:– ಶ್ರೀಮತಿ ವನಿತ ಪಿ ಕೋಂ ಎನ್.ಎಸ್. ಜಯರಾಂ**).

ಟಿಪ್ಪಣಿ: ವಿಷಯಕ್ಕೆ ಸಂಬಂಧಿಸಿದಂತೆ, ಪ್ರಸ್ತಾವಿತ ಜಮೀನಿನ ಏಕ–ನಿವೇಶನ ವಿನ್ಯಾಸ ನಕ್ಷೆಗೆ ಅನುಮೋದನೆ ನೀಡುವಂತೆ ಮುಖ್ಯಾಧಿಕಾರಿ, ಪಟ್ಟಣಪಂಚಾಯಿತಿ, ಕುಶಾಲನಗರ ಮತ್ತು ಅರ್ಜಿದಾರರು ಪ್ರಸ್ತಾವನೆಯನ್ನು ಈ ಕಛೇರಿಗೆ ಸಲ್ಲಿಸಿರುತ್ತಾರೆ. ಸದರಿ ಜಮೀನನ್ನು ಜಿಲ್ಲಾಧಿಕಾರಿಗಳು, ಕೊಡಗು ಜಿಲ್ಲೆ, ಮಡಿಕೇರಿ ಇವರ ಅಧಿಕೃತ ಜ್ಞಾಪನ ಪತ್ರ ಸಂಖ್ಯೆ: ಭೂಪರಿ/381/16–17 (LAND10000880) ದಿನಾಂಕ: 31–08–2017 ರಂದು ವ್ಯವಸಾಯೇತರ ವಸತಿ ಉದ್ದೇಶಕ್ಕೆ ಉದ್ದೇಶಕ್ಕೆ ಭೂ–ಪರಿವರ್ತಿಸಿ ಆದೇಶಿಸಿರುತ್ತಾರೆ. ಪ್ರಶ್ನಿತ ಜಮೀನು ಸರ್ಕಾರದಿಂದ ಅನುಮೋದನೆಗೊಂಡ ಮಹಾಯೋಜನೆ–2031 ರಂತೆ ವಸತಿ ವಲಯದಲ್ಲಿದೆ. ಪ್ರಶ್ನಿತ ಜಮೀನಿಗೆ 30 ಅಡಿ ಅಗಲದ ಸಾರ್ವಜನಿಕ ಸಂಪರ್ಕ ರಸ್ತೆ ಇರುತ್ತದೆ ಎಂಬುದಾಗಿ ಮುಖ್ಯಾಧಿಕಾರಿ ಪಟ್ಟಣ ಪಂಚಾಯಿತಿ, ಕುಶಾಲನಗರ ಇವರು ದೃಢೀಕರಣ ಪತ್ರ ನೀಡಿರುತ್ತಾರೆ. ಭೂದಾಖಲೆಗಳ ಸಹಾಯಕ ನಿರ್ದೇಶಕರು ದೃಢೀಕರಿಸಿರುವ ಸರ್ವೆ ನಕ್ಷೆಯಂತೆ ವಿನ್ಯಾಸದಲ್ಲಿ ಸುತ್ತಳತೆ ಹಾಗೂ ಎಲ್ಲೆಯನ್ನು ನಿಗಧಿಪಡಿಸಿ ಅರ್ಜಿದಾರರು ವಿನ್ಯಾಸ ನಕ್ಷೆಯನ್ನು ಸಲ್ಲಿಸಿದ್ದು, ಅದರಂತೆ ವಸತಿಗಾಗಿ 1000.48 ಚ.ಮೀ (ಶೇ.100%) ಕಾಯ್ದಿರಿಸಲಾಗಿದೆ. ವಿಷಯನ್ನು ಪ್ರಾಧಿಕಾರದ ಸಭೆಯ ಚರ್ಚೆಗೆ ಮಂಡಿಸಿದೆ.

ಸದಸ್ಯಕಾರ್ಯದರ್ಶಿಯವರ ಅಭಿಪ್ರಾಯ: ಪ್ರಶ್ನಿತ ಜಮೀನಿನ ಸ್ಥಳಪರಿಶೀಲನೆಯನ್ನು ದಿನಾಂಕ: 20–03–2023 ರಂದು ಮಾಡಲಾಗಿರುತ್ತದೆ. ಸಲ್ಲಿಸಿರುವ ದಾಖಲೆಗಳ ಪೈಕಿ ಪಟ್ಟಣ ಪಂಚಾಯಿತಿ ಕಾರ್ಯಾಲಯವು ಸದರಿ ಜಮೀನಿಗೆ ಸಾರ್ವಜನಿಕ ರಸ್ತೆ ಸಂಪರ್ಕ ಇರುವ ಬಗ್ಗೆ ದೃಢೀಕರಣ ಪತ್ರವನ್ನು ಸಲ್ಲಿಸಿರುತ್ತಾರೆ. ಆದರೆ ಸದರಿ ಸರ್ವೆ ನಂಬರಿನ ಹಿಸ್ಸಾ ಸರ್ವೆ ನಂಬರ್‌ಗಳಾದ 57/1, 57/5, 57/8, 57/4 ಹಾಗೂ ಪ್ರಸ್ತಾವಿತ ಸರ್ವೆ ನಂಬರ್ ಆದ 57/10 ಗೆ ಸಂಪರ್ಕ ರಸ್ತೆ ಒಂದೇ ಆಗಿದ್ದು, ಅದನ್ನು ಸ್ಥಳೀಯ ಸಂಸ್ಥೆಗೆ ಹಸ್ತಾಂತರಿಸಿರುವುದಿಲ್ಲ. ದಿನಾಂಕ: 31–03–2021 ರಂದು ನಡೆದ ಪ್ರಾಧಿಕಾರದ 43ನೇ ಸಾಮಾನ್ಯ ಸಭೆಯ ನಡಾವಳಿಗಳ ಪ್ರಕಾರ ವಿಷಯ ಸಂಖ್ಯೆ 10(ಇ) ರಲ್ಲಿ ಈಗಾಗಲೇ ಸದರಿ ಜಮೀನಿನ ಭೂ–ಪರಿವರ್ತನೆಗೆ ರಸ್ತೆ ಸಂಪರ್ಕ ಇರುವುದಾಗಿ ಪಟ್ಟಣ ಪಂಚಾಯಿತಿಯಿಂದ ನಿರಾಕ್ಷೇಪಣಾ ಪತ್ರ ನೀಡಿರುವುದರಿಂದ ಹಾಗೂ ಜಿಲ್ಲಾಧಿಕಾರಿಗಳಿಂದ ಭೂ–

ಪರಿವರ್ತನೆಗೊಂಡಿರುವುದರಿಂದ ರಸ್ತೆ ಬಗ್ಗೆ ನೀಡಿರುವ ನಿರಾಕ್ಷೇಪಣಾ ಪತ್ರವನ್ನು ಪರಿಗಣಿಸಿ ವಿನ್ಯಾಸ ನಕ್ಷೆಗೆ ಅನುಮೋದನೆ ನೀಡುವಂತೆ ಸಭೆಯು ಸದಸ್ಯ ಕಾರ್ಯದರ್ಶಿಯವರಿಗೆ ಸೂಚಿಸಿರುತ್ತದೆ. ಹೀಗಿದ್ದು ಸದರಿ ಪ್ರಸ್ತಾವನೆಗೆ ಅನುಮೋದನೆ ನೀಡಿದರೆ ಮುಂದಿನ ದಿನಗಳಲ್ಲಿ ಹಿಸ್ಸಾ ಸರ್ವೆ ನಂಬರ್‌ಗಳಿಗೆ ತೊಂದರೆ ಆಗುವ ಸಾಧ್ಯತೆ ಇದ್ದು, ಸದರಿ ಪ್ರಸ್ತಾವನೆಯ ಜಮೀನಿಗೆ ಸಂಪರ್ಕ ರಸ್ತೆಗೆ ಬಿಟ್ಟಿರುವ ಜಾಗವನ್ನು ಸಂಬಂಧಪಟ್ಟ ಮಾಲೀಕರು ತನ್ನ ಮಾಲೀಕತ್ವ ಇರುವುದಾಗಿ ಬೇಲಿ ಹಾಕಿಕೊಳ್ಳುವ ಸಾಧ್ಯತೆ ಇರುತ್ತದೆ. ಆದ್ದರಿಂದ ಸದರಿ ಪ್ರಸ್ತಾವನೆಯನ್ನು ಸಭೆಗೆ ಮಂಡಿಸಿದೆ.

ನಿರ್ಣಯ: ವಿಷಯವನ್ನು ಸಭೆಯಲ್ಲಿ ಚರ್ಚಿಸಿದ ನಂತರ, ಮೇಲೆ ವಿವರಿಸಿರುವ ಸದಸ್ಯ ಕಾರ್ಯದರ್ಶಿಯವರ ಅಭಿಪ್ರಾಯವನ್ನು ಪರಿಗಣಿಸಿ ಮೂಲ ಸರ್ವೆ ನಂಬರಿನ ಹಿಸ್ಸಾ ಸರ್ವೆ ನಂಬರ್‌ಗಳಾದ 57/1, 57/5, 57/8, 57/4 ಹಾಗೂ ಪ್ರಸ್ತಾವಿತ ಸರ್ವೆ ನಂಬರ್ ಆದ 57/10 ಗೆ ಸಂಪರ್ಕ ರಸ್ತೆ ಒಂದೇ ಆಗಿದ್ದು, ಅದನ್ನು ಸ್ಥಳೀಯ ಸಂಸ್ಥೆಗೆ ಹಸ್ತಾಂತರಿಸಿರುವುದಿಲ್ಲ. ಅಧ್ಯಕ್ಷರು ಹಾಗೂ ಸದಸ್ಯರುಗಳ ಪ್ರಕಾರ ಸದರಿ ಸರ್ವೆ ನಂಬರ್‌ಗೆ 30 ಅಡಿ ಸಂಪರ್ಕ ರಸ್ತೆಯನ್ನು ಪುರಸಭೆಗೆ ಹಸ್ತಾಂತರಿಸಿ, ದಾಖಲೆಯನ್ನು ಸಲ್ಲಿಸಿದ ನಂತರ ವಸತಿ ಏಕನಿವೇಶನ ವಿನ್ಯಾಸ ನಕ್ಷೆಗೆ ಅನುಮೋದನೆ ನೀಡಬಹುದೆಂಬ ಅಭಿಪ್ರಾಯವನ್ನು ಸೂಚಿಸಿರುತ್ತಾರೆ. ಆದರೆ ಸದರಿ ಜಮೀನಿನ ಮೂಲ ಸರ್ವೆ ನಂಬರ್ ಆದ 57ರ ವಿಸ್ತೀರ್ಣವು ಈ ಹಿಂದೆ 8.37 ಎಕರೆ, 3.37 ಎಕರೆ ಹಾಗೂ 0.50 ಎಕರೆ ಆಗಿದ್ದು, ಪ್ರಸ್ತುತ ಸ.ನಂ. 57/9, 0.30 ಎಕರೆ ಆಗಿ ಪರಿವರ್ತನೆಗೊಂಡಿರುತ್ತದೆ. ಹೀಗೆ ಮೂಲ ಸರ್ವೆ ನಂಬರಿನ ಮಾಲೀಕತ್ವದ ಬದಲಾವಣೆ ಹಾಗೂ ಪೋಡಿ ಆಗುವುದರಿಂದ, ಬಹುನಿವೇಶನ ವಿನ್ಯಾಸ ನಕ್ಷೆಯಲ್ಲಿ ಪ್ರಾಧಿಕಾರಕ್ಕೆ ಹಾಗೂ ಸ್ಥಳೀಯ ಸಂಸ್ಥೆಗೆ ಹಸ್ತಾಂತರಿಸಬೇಕಾಗಿರುವ ನಾಗರೀಕ ಸೌಲಭ್ಯ ಹಾಗೂ ಉದ್ಯಾನವನ/ಬಯಲುಜಾಗಗಳ ವಿಸ್ತೀರ್ಣವು ತಪ್ಪುತ್ತಿದ್ದು, ನಗರ ಯೋಜನಾ ತತ್ವಗಳ ಉಲ್ಲಂಘನೆಯನ್ನು ಸದರಿ ಪ್ರಸ್ತಾವನೆಯಲ್ಲಿ ಕಾಣಬಹುದಾಗಿರುತ್ತದೆ. ಕುಶಾಲನಗರ ವಲಯ ನಿಯಮಾವಳಿಯ ಪ್ರಕಾರ ಯಾವುದೇ ವಿಸ್ತೀರ್ಣದ ಭೂಮಿಯನ್ನು ಏಕವಿನ್ಯಾಸ ನಕ್ಷೆಯಾಗಿ ಅನುಮೋದಿಸಬಹುದಾಗಿದ್ದು, ಭೂಮಾಲೀಕರುಗಳು ಸದರಿ ಪ್ರಸ್ತಾವನೆಯಂತೆ ಮುಂದೆ ತಮ್ಮ ಭೂಮಿಯನ್ನು ಬಹುನಿವೇಶನ ವಿನ್ಯಾಸ ಅನುಮೋದನೆ ಮಾಡದೇ ಪೋಡಿ ಮಾಡಿ ನಿವೇಶನಗಳನ್ನು ಮಾರಾಟ ಮಾಡುವ ಸಂಭವವಿರುತ್ತದೆ. ಸದರಿ ಪ್ರಸ್ತಾವನೆಗೆ ಸಂಬಂಧಪಟ್ಟ ಮೂಲ ಸರ್ವೆ ನಂ. 57 ಈಗಾಗಲೇ ಪೋಡಿಯಾಗಿ ಮಾರಾಟವಾಗಿದ್ದು, ಬಹುನಿವೇಶನ ವಿನ್ಯಾಸವನ್ನು ಮೂಲ ಮಾಲೀಕರಿಂದ ಅಭಿವೃದ್ಧಿಪಡಿಸಲು ಸಾಧ್ಯವಾಗದೇ ಇರುವುದರಿಂದ ಸದರಿ ಸರ್ವೆ ನಂಬರ್‌ಗೆ 30 ಅಡಿ ಸಂಪರ್ಕ ರಸ್ತೆಯನ್ನು ಪುರಸಭೆಗೆ ಹಸ್ತಾಂತರಿಸಿ, ದಾಖಲೆಯನ್ನು ಸಲ್ಲಿಸಿದ ನಂತರ ವಸತಿ ಏಕನಿವೇಶನ ವಿನ್ಯಾಸ ನಕ್ಷೆಗೆ ಅನುಮೋದನೆ ನೀಡಬಹುದೆಂದು ಸಭೆಯಲ್ಲಿ ಸರ್ವಾನುಮತದಿಂದ ನಿರ್ಣಯಿಸಲಾಯಿತು.

ವಿಷಯ ಸಂಖ್ಯೆ(5): ಕೊಡಗು ಜಿಲ್ಲೆ, ಕುಶಾಲನಗರ ತಾಲ್ಲೂಕು, ಕುಶಾಲನಗರ ಹೋಬಳಿ, ಬೈಚನಹಳ್ಳಿ ಗ್ರಾಮದ ಸ.ನಂ. 10/2 ರಲ್ಲಿನ 2.25 ಎಕರೆ, ಸ.ನಂ. 89/4 ರಲ್ಲಿನ 1.40 ಎಕರೆ ಮತ್ತು ಸ.ನಂ. 9/2 ರಲ್ಲಿನ 0.40 ಎಕರೆ ಒಟ್ಟು 4.05 ಎಕರೆ ವಿಸ್ತೀರ್ಣದ ಜಮೀನಿನ ವಸತಿ ಉದ್ದೇಶದ ಬಹು–ನಿವೇಶನ ವಿನ್ಯಾಸ ನಕ್ಷೆಗೆ ಅಂತಿಮ ಅನುಮೋದನೆ ನೀಡಲು ಹಾಗೂ ನಿವೇಶನಗಳನ್ನು ಬಿಡುಗಡೆಗೊಳಿಸುವಂತೆ ಕೋರಿರುವ ಬಗ್ಗೆ (**ಅರ್ಜಿದಾರರು:– ಶ್ರೀಮತಿ ದೇವಮ್ಮ**)

ಟಿಪ್ಪಣಿ: ವಿಷಯಕ್ಕೆ ಸಂಬಂಧಿಸಿದಂತೆ, ಮುಖ್ಯಾಧಿಕಾರಿ, ಪುರಸಭೆ, ಕುಶಾಲನಗರ ಇವರು ಸದರಿ ವಸತಿ ವಿನ್ಯಾಸದಲ್ಲಿ ರಸ್ತೆ, ನೀರು ಸರಬರಾಜು ಮತ್ತು ಒಳಚರಂಡಿ, ವಿದ್ಯುಚ್ಛಕ್ತಿ ಹಾಗೂ ಉದ್ಯಾನವನ ಅಭಿವೃದ್ಧಿಗಳಿಗೆ ಸಂಬಂಧಿಸಿದ ಕಾಮಗಾರಿಗಳು ಪೂರ್ಣಗೊಂಡಿದ್ದು, ಅಭಿವೃದ್ಧಿ ಕಾಮಗಾರಿಗಳು ಪೂರ್ಣಗೊಂಡಿರುವ ಬಗ್ಗೆ ಸಂಬಂಧಪಟ್ಟ ಇಲಾಖೆಗಳಿಂದ ಪಡೆದಿರುವ ಕಾಮಗಾರಿ ಮುಕ್ತಾಯ

ದೃಢೀಕರಣ ಪತ್ರಗಳನ್ನು ಅಡಕಗೊಳಿಸಿ ಅಂತಿಮ ವಿನ್ಯಾಸ ನಕ್ಷೆಗೆ ಅನುಮೋದನೆ ನೀಡಲು ಹಾಗೂ ನಿವೇಶನಗಳನ್ನು ಬಿಡುಗಡೆ ಮಾಡಲು ಕೋರಿರುತ್ತಾರೆ.

ಪರಿಶೀಲಿಸಲಾಗಿ, ಪ್ರಶ್ನಿತ ಜಮೀನಿನ ಕರಡು ವಿನ್ಯಾಸ ನಕ್ಷೆಗೆ ದಿನಾಂಕ: 16–09–2022 ರಂದು ನಡೆದ ಪ್ರಾಧಿಕಾರದ ಸಭೆಯ ವಿಷಯ ಸಂಖ್ಯೆ 10(ಇ) ರ ನಿರ್ಣಯದನ್ವಯ ಈ ಕಛೇರಿಯಿಂದ ದಿನಾಂಕ: 30–09–2022 ರಂದು ಅನುಮೋದನೆ ನೀಡಲಾಗಿದೆ. ಅನುಮೋದಿತ ಕರಡು ವಿನ್ಯಾಸ ನಕ್ಷೆಯಲ್ಲಿ ವಸತಿ ಉಪಯೋಗಕ್ಕಾಗಿ 8559.18 ಚ.ಮೀ (ಶೇ.52.22%), ವಾಣಿಜ್ಯ ಉಪಯೋಗಕ್ಕಾಗಿ 427.67 ಚ.ಮೀ (2.61%), ಉದ್ಯಾನವನ ಮತ್ತು ಆಟದ ಮೈದಾನ(ಬಫರ್) 1640.80 ಚ.ಮೀ (10.01%), ನಾಗರೀಕ ಸೌಲಭ್ಯಕ್ಕಾಗಿ 819.49 ಚ.ಮೀ (ಶೇ. 05.00%) ಮತ್ತು ರಸ್ತೆಗಾಗಿ 4942.62 ಚ.ಮೀ (ಶೇ.30.16%) ವಿಸ್ತೀರ್ಣದ ಪ್ರದೇಶನ್ನು ಕಾಯ್ದಿರಿಸಲಾಗಿದೆ. ಸದರಿ ಜಮೀನಿನ ಸ್ಥಳ ಪರಿಶೀಲಿಸಲಾಗಿ, ಅರ್ಜಿದಾರರು ಸ್ಥಳದಲ್ಲಿ ಅಭಿವೃದ್ಧಿಪಡಿಸಿರುತ್ತಾರೆ. ವಿನ್ಯಾಸದಲ್ಲಿನ ಅಭಿವೃದ್ಧಿ ಕಾಮಗಾರಿಗಳಾದ ರಸ್ತೆ, ಚರಂಡಿ, ವಿದ್ಯುಚ್ಛಕ್ತಿ, ನೀರು ಸರಬರಾಜು ಮತ್ತು ಒಳಚರಂಡಿ ಹಾಗೂ ಉದ್ಯಾನವನ ಅಭಿವೃದ್ಧಿ ಕಾಮಗಾರಿಗಳನ್ನು ಪೂರ್ಣಗೊಳಿಸಿರುವ ಬಗ್ಗೆ ಸಂಬಂಧಪಟ್ಟ ಇಲಾಖೆಗಳಾದ ಪುರಸಭೆ, ಬೆಸ್ಕಾಂ, ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ಹಾಗೂ ತೋಟಗಾರಿಕೆ ಇಲಾಖೆಗಳಿಂದ ಕಾಮಗಾರಿ ಮುಕ್ತಾಯ ದೃಢೀಕರಣ ಪತ್ರವನ್ನು ಸಲ್ಲಿಸಿರುತ್ತಾರೆ. ಸದರಿ ವಿನ್ಯಾಸದಲ್ಲಿ ರಸ್ತೆ, ಉದ್ಯಾನವನಕ್ಕಾಗಿ ಕಾಯ್ದಿರಿಸಿರುವ ಜಮೀನುಗಳನ್ನು ಭೂ–ಮಾಲೀಕರು ಸಂಬಂಧಪಟ್ಟ ಸ್ಥಳೀಯ ಸಂಸ್ಥೆಯಾದ ಕುಶಾಲನಗರ ಪುರಸಭೆಗೆ ಹಸ್ತಾಂತರಿಸಿರುವುದಿಲ್ಲ ಮತ್ತು ನಾಗರೀಕ ಸೌಲಭ್ಯಕ್ಕಾಗಿ ಕಾಯ್ದಿರಿಸಿರುವ ಜಮೀನನ್ನು ಪ್ರಾಧಿಕಾರಕ್ಕೆ ಹಸ್ತಾಂತರಿಸಿರುವುದಿಲ್ಲ. ಸದರಿ ವಿನ್ಯಾಸಕ್ಕೆ ಅಂತಿಮ ಅನುಮೋದನೆ ನೀಡುವ ಸಂಬಂಧ ಹಾಗೂ ಶೇ. 100 ರಷ್ಟು ನಿವೇಶನಗಳನ್ನು ಬಿಡುಗಡೆಗೊಳಿಸುವ ಸಂಬಂಧ, ವಿಷಯವನ್ನು ಸಭೆಯ ನಿರ್ಣಯಕ್ಕಾಗಿ ಮಂಡಿಸಿದೆ.

ಸದಸ್ಯಕಾರ್ಯದರ್ಶಿಯವರ ಅಭಿಪ್ರಾಯ: ಪ್ರಸ್ತಾವನೆಗೆ ಸಂಬಂಧಿಸಿದಂತೆ, ಅರ್ಜಿದಾರರು ದಿನಾಂಕ: 14–03–2023 ರಂದು ಸಂಬಂಧಪಟ್ಟ ಇಲಾಖೆಗಳಿಂದ ಕಾಮಗಾರಿ ಪೂರ್ಣಗೊಂಡಿರುವ ಬಗ್ಗೆ ಮುಕ್ತಾಯ ದೃಢೀಕರಣ ಪತ್ರವನ್ನು ಪಡೆದು ಸಲ್ಲಿಸಿರುತ್ತಾರೆ. ಆದರೆ ಸ್ಥಳ ಪರಿಶೀಲಿಸಿದಾಗ ಉದ್ಯಾನವನವನ್ನು ಅನುಮೋದನೆಗೊಂಡ ಕರಡು ವಿನ್ಯಾಸ ನಕ್ಷೆಯಂತೆ ಅಭಿವೃದ್ಧಿಪಡಿಸಿರುವುದಿಲ್ಲ. ಜಮೀನಿನ ಪೂರ್ವ ದಿಕ್ಕಿನಲ್ಲಿರುವ ತೋಡು ಹರಿಯುತ್ತಿರುವ ಜಾಗದಲ್ಲಿ 12.0ಮೀ ಅಗಲದ ರಸ್ತೆಯ ಆಚೆ ಉದ್ಯಾನವನ/ಬಫರ್ ಜಾಗವಿದ್ದು, ಅದನ್ನು ಅಭಿವೃದ್ಧಿಪಡಿಸಿದ್ದಾಗಲೀ ಅಥವಾ ಗಡಿ ಗುರುತಿಸುವುದಾಗಲೀ ಮಾಡಿರುವುದಿಲ್ಲ. ಅದಲ್ಲದೇ ಅನುಮೋದಿಸಿದ ಕರಡು ವಿನ್ಯಾಸ ನಕ್ಷೆಯಲ್ಲಿ ನಿವೇಶನಗಳ ಸಂಖ್ಯೆಗಳು ನಮೂದಾಗಿರುವುದಿಲ್ಲ. ನಾಗರೀಕ ಸೌಲಭ್ಯದ ವಿಸ್ತೀರ್ಣದಲ್ಲಿ ವ್ಯತ್ಯಾಸ ಕಂಡುಬಂದಿರುತ್ತದೆ ಹಾಗೂ ಪೂರ್ವ ದಿಕ್ಕಿನಲ್ಲಿರುವ 9.0ಮೀ ರಸ್ತೆಯನ್ನು ಸಂಪೂರ್ಣವಾಗಿ ಅಭಿವೃದ್ಧಿಪಡಿಸಿರುವುದಿಲ್ಲ. ಸದರಿ ಜಮೀನಿನ ಮಾಲೀಕರು ವಿನ್ಯಾಸದಲ್ಲಿರುವ ರಸ್ತೆಗಳನ್ನು ಸೇರಿಸಿಕೊಂಡು ತಂತಿಬೇಲಿ (Fencing) ಅನ್ನು ಮಾಡಿರುತ್ತಾರೆ. ಕೆ.ಟಿ.ಸಿ.ಪಿ ಕಾಯ್ದೆ 1961 ಹಾಗೂ ಕರ್ನಾಟಕ ಯೋಜನಾ ಪ್ರಾಧಿಕಾರಗಳ ನಿಯಮಗಳ ಪ್ರಕಾರ ಇದು 'ಗೇಟೆಡ್ ಕಮ್ಯೂನಿಟಿಸ್' (Gated Communities) ಗಳ ಲಕ್ಷಣ ಕಂಡುಬಂದಿದ್ದು, ನೀಡಿರುವ ಕರಡು ವಿನ್ಯಾಸ ನಕ್ಷೆಯ ಅನುಮೋದನೆಯ ಷರತ್ತಿನ ಸಂಖ್ಯೆ (15) ಮತ್ತು (20)ರ ಉಲ್ಲಂಘನೆಯಾಗಿರುತ್ತದೆ. ಸದರಿ ಜಮೀನಿನಲ್ಲಿ ರಸ್ತೆ ಇರುವ ಜಾಗದಲ್ಲಿ ತಂತಿಬೇಲಿ (Fencing) ಅನ್ನು ತೆರವುಗೊಳಿಸಬೇಕಾಗಿರುತ್ತದೆ. ಅದಲ್ಲದೆ ಸದರಿ ವಿನ್ಯಾಸದ ಕಛೇರಿಯೆಂದು ಒಂದು ವಸತಿ ಕಟ್ಟಡವನ್ನು ಅನುಮತಿ ಇಲ್ಲದೆ ನಿರ್ಮಿಸಿರುತ್ತಾರೆ. ಸ್ಥಳಪರಿಶೀಲನೆ ಸಮಯದಲ್ಲಿ ಸಂಪೂರ್ಣ ನಿವೇಶನಗಳ ಅಳತೆಯನ್ನು ಮಾಡುವುದು ಬಾಕಿ ಇರುತ್ತದೆ. ಆದ್ದರಿಂದ ಸದರಿ ಪ್ರಸ್ತಾವನೆಯ ಬಗ್ಗೆ ಚರ್ಚಿಸಲು ಸಭೆಗಾಗಿ ಮಂಡಿಸಲಾಗಿರುತ್ತದೆ.

ನಿರ್ಣಯ: ವಿಷಯವನ್ನು ಸಭೆಯಲ್ಲಿ ಚರ್ಚಿಸಲಾಗಿದ್ದು, ಅಧ್ಯಕ್ಷರು ಹಾಗೂ ಸದಸ್ಯರುಗಳು, ಮೇಲೆ ವಿವರಿಸಿರುವ ಸದಸ್ಯ ಕಾರ್ಯದರ್ಶಿಯವರ ಅಭಿಪ್ರಾಯವನ್ನು ಪರಿಗಣಿಸಿ ಉದ್ಯಾನವನವನ್ನು ಅನುಮೋದನೆಗೊಂಡ ಕರಡು ವಿನ್ಯಾಸ ನಕ್ಷೆಯಂತೆ ಅಭಿವೃದ್ಧಿಪಡಿಸಿ, ನಕ್ಷೆಯಲ್ಲಿ ತೋರಿಸಿರುವ 12.0ಮೀ ಅಗಲದ ರಸ್ತೆಯ ಆಚೆ ಉದ್ಯಾನವನ/ಬಫರ್ ಜಾಗವಿದ್ದು, ಅದನ್ನು ಅಭಿವೃದ್ಧಿಪಡಿಸಿ ಗಡಿ ಗುರುತಿಸಿ, ಅನುಮೋದಿಸಿದ ಕರಡು ವಿನ್ಯಾಸ ನಕ್ಷೆಯಲ್ಲಿ ನಿವೇಶನಗಳ ಸಂಖ್ಯೆಗಳು ನಮೂದಿಸಬೇಕಾಗಿರುತ್ತದೆ. ಜಮೀನಿನ ಪೂರ್ವ ದಿಕ್ಕಿನಲ್ಲಿರುವ ರಸ್ತೆಯನ್ನು ಸಂಪೂರ್ಣವಾಗಿ ಅಭಿವೃದ್ಧಿಪಡಿಸಿ, ರಸ್ತೆ ಇರುವ ಜಾಗದಲ್ಲಿ ತಂತಿಬೇಲಿ (Fencing) ಅನ್ನು ತೆರವುಗೊಳಿಸಿ, ಸಂಪೂರ್ಣ ನಿವೇಶನಗಳ ಅಳತೆಯನ್ನು ಮಾಡುವುದು ಬಾಕಿ ಇರುವುದರಿಂದ ಅವುಗಳನ್ನು ಮರುಸ್ಥಳಪರಿಶೀಲನೆಯ ವೇಳೆ ಅಳತೆ ಮಾಡಿದ ನಂತರ ಸದರಿ ಜಮೀನಿನ ವಸತಿ ವಿನ್ಯಾಸ ನಕ್ಷೆಗೆ ಅಂತಿಮ ಅನುಮೋದನೆ ನೀಡಬಹುದಾಗಿರುತ್ತದೆ ಹಾಗೂ ನಿವೇಶನಗಳನ್ನು ಬಿಡುಗಡೆಗೊಳಿಸಬಹುದಾಗಿರುತ್ತದೆ ಎಂದು ಸಭೆಯಲ್ಲಿ ಸರ್ವಾನುಮತದಿಂದ ನಿರ್ಣಯಿಸಲಾಗಿರುತ್ತದೆ.

ವಿಷಯ ಸಂಖ್ಯೆ(6): ಅಧ್ಯಕ್ಷರ ಅಪ್ಪಣೆ ಮೇರೆಗೆ ಚರ್ಚಿಸಬಹುದಾದ ಇತರೆ ಹೆಚ್ಚುವರಿ ವಿಷಯಗಳು:

–ಯಾವುದೂ ಇರುವುದಿಲ್ಲ–

ವಂದನಾರ್ಪಣೆಯೊಂದಿಗೆ ಸಭೆಯು ಮುಕ್ತಾಯಗೊಂಡಿತು

ಸಹಿ/–	ಸಹಿ/–
ಸದಸ್ಯ ಕಾರ್ಯದರ್ಶಿ	ಅಧ್ಯಕ್ಷರು
ಕುಶಾಲನಗರ ಯೋಜನಾ ಪ್ರಾಧಿಕಾರ	ಕುಶಾಲನಗರ ಯೋಜನಾ ಪ್ರಾಧಿಕಾರ
ಕುಶಾಲನಗರ	ಕುಶಾಲನಗರ